# ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

**"ಜ್ಞಾನ ಸಂಗಮ", ಬೆಳಗಾವಿ 590 018, ಕರ್ನಾಟಕ ರಾಜ್ಯ**

**ಪ್ರೊ. ಸತೀಶ ಅಣ್ಣಿಗೇರಿ** **ದೂರವಾಣಿ ಸಂ: (0831) –2405468**

**ಪಿಹೆಚ್.ಡಿ.**

**ಪ್ರಭಾರಿ ಕುಲಸಚಿವರು** **ಫ್ಯಾಕ್ಸ್ ಸಂ : (0831) – 2405467**


ಉಲ್ಲೇಖ ಸಂ. : ವಿತಾವಿ/ಬಿಜಿಎಂ/ಡಿಪಿಎಆರ್/ಸಿಆರ್(4)/20/2019-20/419 ದಿನಾಂಕ : **20 JUN 2019**

## ಅಧಿಸೂಚನೆ

ವಿಷಯ : ವಿ.ತಾ.ವಿ.ಯ ಎಲ್ಲಾ ಕಛೇರಿಗಳಿಗೆ ಪ್ರತಿ ತಿಂಗಳ ನಾಲ್ಕನೇ ಶನಿವಾರವನ್ನು ಸಾರ್ವತ್ರಿಕ ರಜೆಯನ್ನಾಗಿ ಘೋಷಿಸುವುದರ ಕುರಿತು.

ಉಲ್ಲೇಖ : 1. ಕರ್ನಾಟಕ ಸರ್ಕಾರದ ಅಧಿಸೂಚನೆ ಸಂ. ಸಿಆಸುಇ 02 ಹೆಚ್‌ಹೆಚ್ಎಲ್ 2019 ದಿನಾಂಕ 12-06-2019.

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ 20-06-2019.

ಉಲ್ಲೇಖಿತ ಸರ್ಕಾರದ ಅಧಿಸೂಚನೆ ಹಾಗೂ ಮಾನ್ಯ ಕುಲಪತಿಗಳ ಅನುಮೋದನೆಯ ಮೇರೆಗೆ, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಅಧೀನದಲ್ಲಿರುವ ಎಲ್ಲ ಕಛೇರಿಗಳು, ಪ್ರಾದೇಶಿಕ ಕೇಂದ್ರಗಳು, ಇತ್ಯಾದಿ ವಿಭಾಗಗಳಿಗೆ ಈ ತಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ಪ್ರತಿ ತಿಂಗಳ ನಾಲ್ಕನೇ ಶನಿವಾರವನ್ನು ಸಾರ್ವತ್ರಿಕ ರಜೆ ಎಂದು ಘೋಷಿಸಲಾಗಿದೆ ಹಾಗೂ ಈ ಆದೇಶದ ಅಧಿಸೂಚನೆಯಲ್ಲಿ ಬರುವ ಸಿಬ್ಬಂದಿಗಳಿಗೆ ಇರುವ ಹದಿನೈದು ದಿವಸಗಳ ಸಾಂದರ್ಭಿಕ ರಜೆಯನ್ನು ಹತ್ತು ದಿವಸಗಳಿಗೆ ನಿಗದಿಪಡಿಸಲಾಗಿದೆ.

ಮುಂದುವರೆದು, ವಿ.ತಾ.ವಿ.ಯ ಘಟಕ ಯುಬಿಡಿಟಿ ಇಂಜನಿಯರಿಂಗ್ ಕಾಲೇಜ್, ದಾವಣಗೆರೆ ಹಾಗೂ ವಿ.ತಾ.ವಿ.ಯ ಸ್ನಾತಕೋತ್ತರ ಕೇಂದ್ರಗಳಾದ ಬೆಳಗಾವಿ, ಮೈಸೂರು, ಕಲಬುರಗಿ ಹಾಗೂ ಮುದ್ದೇನಹಳ್ಳಿ ಈ ಕೇಂದ್ರಗಳಿಗೆ ಸದರಿ ಅಧಿಸೂಚನೆಯು ಅನ್ವಯವಾಗದೇ, ಹಾಲಿ ಇರುವ ಪ್ರತಿ ಶನಿವಾರ ಅರ್ಧ ದಿನದ ರಜೆಯು ಹಾಗೂ ಹದಿನೈದು ದಿವಸಗಳ ಸಾಂದರ್ಭಿಕ ರಜೆಯು ಮುಂದುವರೆಯುತ್ತದೆ.

ಆದೇಶದ ಮೇರೆಗೆ,

(ಪ್ರೊ. ಸತೀಶ ಅಣ್ಣಿಗೇರಿ)
ಪ್ರಭಾರಿ ಕುಲಸಚಿವರು

**ಪ್ರತಿಯನ್ನು ಮಾಹಿತಿಗಾಗಿ :**

1. ಘನತೆವೆತ್ತ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು – 1
2. ಮಾನ್ಯ ಕುಲಪತಿಗಳು, ವಿ.ತಾ.ವಿ., ಬೆಳಗಾವಿ ಇವರಿಗೆ ಅವರ ಕಾರ್ಯದರ್ಶಿಗಳ ಮುಖಾಂತರ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿ ಕಟ್ಟಡ, ಡಾ.ಅಂಬೇಡ್ಕರ್ ವೀಧಿ, ಬೆಂಗಳೂರು –1
4. ವಿಶ್ವವಿದ್ಯಾಲಯದ ಕಾರ್ಯಕಾರಿ ಮಂಡಳಿಯ ಎಲ್ಲ ಸದಸ್ಯರುಗಳಿಗೆ.
5. ವಿಶ್ವವಿದ್ಯಾಲಯದ ವಿದ್ಯಾ ವಿಧೇಯಕ ಮಂಡಳಿಯ ಎಲ್ಲ ಸದಸ್ಯರುಗಳಿಗೆ.
6. ಪ್ರಾದೇಶಿಕ ನಿರ್ದೇಶಕರು, ವಿ.ತಾ.ವಿ.ಯ ಪ್ರಾದೇಶಿಕ ಕಛೇರಿಗಳಾದ ಬೆಳಗಾವಿ, ಮೈಸೂರು, ಬೆಂಗಳೂರು ಹಾಗೂ ಕಲಬುರಗಿ.
7. The Chairperson / Programme Co-ordinator /Co-ordinator - ವಿ.ತಾ.ವಿ.ಯ ಸ್ನಾತಕೋತ್ತರ ಕೇಂದ್ರಗಳಾದ ಬೆಳಗಾವಿ, ಮೈಸೂರು, ಕಲಬುರಗಿ ಹಾಗೂ ಮುದ್ದೇನಹಳ್ಳಿ.
8. ನಿರ್ದೇಶಕರು, ವಿ.ತಾ.ವಿ.ಯ ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರ, ದಾಂಡೇಲಿ.
9. ನಿರ್ದೇಶಕರು, ವಿ.ತಾ.ವಿ.ಯ ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರ, ಮುದ್ದೇನಹಳ್ಳಿ.
10. ವಿಶೇಷಾಧಿಕಾರಿಗಳು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ವಿಸ್ತರಣಾ ಕೇಂದ್ರ, ಮಂಗಳೂರು.
11. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಪ್ರಧಾನ ಕಛೇರಿಯ ಆವರಣದಲ್ಲಿರುವ ಎಲ್ಲಾ ಕಛೇರಿಗಳ ಮುಖ್ಯಸ್ಥರುಗಳಿಗೆ.
12. ವಿಶ್ವವಿದ್ಯಾಲಯಕ್ಕೆ ಒಳಪಡುವ ಎಲ್ಲ ತಾಂತ್ರಿಕ ಮಹಾವಿದ್ಯಾಲಯಗಳ ಹಾಗೂ ಘಟಕ ಕಾಲೇಜಿನ ಪ್ರಾಂಶುಪಾಲರಿಗೆ.